ಕರ್ನಾಟಕ ಸರಕಾರ
ಜಿಲ್ಲಾಧಿಕಾರಿಗಳ ಕಾರ್ಯಾಲಯ ವಿಜಯಪುರ
Office of the Deputy Commissioner, Vijayapur District,
Vijayapura-586101 (Karnataka)

| | |
|---|---|
| ದರ್ಬಾರ ಹಾಲ್, ವಿಜಯಪುರ-586101 | ☎ 08352 - 251289, 250479, |
| Fax: 08352 - 251289, 256666 | E-Mail: mag.dcbjp@gmail.com |


ಕ್ರ: ಆರ್‌ಬಿ/ಇಎಸ್‌ಟಿ/03/ಸಿಆರ್-86/2017-18 ದಿನಾಂಕ 19-05-2018

**ಅರ್ಜಿಗಳನ್ನು ಆನ್ ಲೈನ್‌ದಲ್ಲಿ ಸಲ್ಲಿಸಲು ಕೊನೆಯ ದಿನಾಂಕ : 22-06-2018 ರವರೆಗೆ**

## -:: ಅಧಿಸೂಚನೆ ::-

ವಿಷಯ:- ವಿಜಯಪುರ ಜಿಲ್ಲೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

ಉಲ್ಲೇಖ:-
1) ಸರ್ಕಾರದ ಅಧಿಸೂಚನೆ ಕ್ರ:ಆರ್‌ಡಿ/299/ಬಿಎಸ್‌ಸಿ/2006, ದಿ.3/2/2009
2) ಸರ್ಕಾರದ ಅಧಿಸೂಚನೆ ಕ್ರ.ಆರ್‌ಡಿ/299/ಬಿಎಸ್‌ಸಿ/2006, ದಿ.4/7/2009
3) ಸರ್ಕಾರದ ಪತ್ರ ಕ್ರ:ಕಂ.ಇ/04/ಬಿ.ಎಸ್.ಸಿ/2011, ದಿ. 25/2/2011
4) ಸರ್ಕಾರದ ಪತ್ರ ಕ್ರ.ಆರ್‌ಡಿ/33/ಡಿಎಸ್‌ಪಿ/2012, ದಿ.21/6/2012
5) ಸರ್ಕಾರದ ಸುತ್ತೋಲೆ ಕ್ರ:ಕಂಇ/100/ಬಿಎಸ್‌ಸಿ/2011, ದಿ. 29/6/2012
6) ಸರ್ಕಾರದ ಅಧಿಸೂಚನೆ ಕ್ರ:ಡಿಪಿಎಆರ್/43/ಎಸ್‌ಸಿಆರ್/2008, ದಿ.7/3/2012
7) ಸರ್ಕಾರದ ಸುತ್ತೋಲೆ ನಂ.ಎಸ್‌ಡಬ್ಲುಡಿ/155/ಬಿಸಿಎ/2012 ದಿ.27/2/2012

-:0:-

ವಿಜಯಪುರ ಜಿಲ್ಲೆಯ ಕಂದಾಯ ಘಟಕದಲ್ಲಿ ಖಾಲಿ ಇರುವ (24) ಇಪತ್ತನಾಲ್ಕು ಗ್ರಾಮ ಲೆಕ್ಕಿಗರ ಹುದ್ದೆಗಳಿಗೆ ವರ್ಗೀಕರಣ ಮತ್ತು ಮೀಸಲಾತಿ ಅನ್ವಯ ಕರ್ನಾಟಕ ನಾಗರೀಕ ಸೇವೆಗಳು (Revenue Subordinate Branch) (Cadre & Recruitment) (Amendment) ನಿಯಮಗಳು 2008 ನಿಯಮ 2 ರನ್ವಯ ಮತ್ತು 2009 ರನ್ವಯ ಹಾಗೂ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ ) ನಿಯಮಗಳು 1977 ರ ಪ್ರಕಾರ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಪ್ರಾಧಿಕಾರವು ನಿಗದಿಪಡಿಸಿರುವ ನಮೂನೆಯಲ್ಲಿ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ.

ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳ ಸಂಖ್ಯೆ : 24

## ಹುದ್ದೆಗಳ ವರ್ಗೀಕರಣ

| ಮೀಸಲಾತಿ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಮಾಜಿ ಸೈನಿಕರು | ಅಂಗವಿಕಲರು | ಯೋಜನಾ ನಿರಾಶ್ರಿತರು | ಕನ್ನಡ ಮಾಧ್ಯಮ | ಒಟ್ಟು |
|---|---|---|---|---|---|---|---|---|
| ಪ.ಜಾ | 1 | 1 | 1 | – | – | – | – | 03 |
| ಪ.ಪಂ | – | 1 | – | – | – | – | – | 01 |
| ಪ್ರವರ್ಗ-1 | – | 1 | – | – | – | – | – | 01 |
| ಪ್ರವರ್ಗ-2(ಎ) | – | 1 | 1 | – | 1 (ಶ್ರವಣದೋಷ ಉಳ್ಳವರು) | 1 | 1 | 05 |
| ಪ್ರವರ್ಗ 2(ಬಿ) | – | 1 | – | – | – | – | – | 01 |
| ಪ್ರವರ್ಗ 3(ಎ) | – | – | – | – | – | – | – | – |
| ಪ್ರವರ್ಗ 3(ಬಿ) | – | 1 | – | – | – | – | – | 01 |
| ಸಾಮಾನ್ಯ | 2 | 3 | 3 | 2 | – | 1 | 1 | 12 |
| ಒಟ್ಟು......... | 3 | 9 | 5 | 2 | 1 | 2 | 2 | 24 |

- ರೋಸ್ಟರ ಪಾಯಿಂಟ್-24 ರಿಂದ ಮುಂದುವರೆಸಲಾಗಿದೆ.
- ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ 23-05-2018
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 22-06-2018

## ಗ್ರಾಮಲೆಕ್ಕಿಗ ಹುದ್ದೆಗೆ ನಿಗಧಿಪಡಿಸಿದ ವೇತನ ಶ್ರೇಣಿ

ರೂ.11600-200-120000-250-13000-300-14200-350-15600-400-17200-450-19000 -500-21000 ಮತ್ತು ಇತರೆ ಭತ್ಯೆಗಳು.

ಅರ್ಜಿ ಸಲ್ಲಿಸುವ ವಿಧಾನ: ಅರ್ಜಿಗಳನ್ನು ಆನ್-ಲೈನ್ (On line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವದಿಲ್ಲ.

## ನಿಗಧಿಪಡಿಸಿದ ಅರ್ಜಿ ಶುಲ್ಕ:

1) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಹಾಗೂ ಪ್ರವರ್ಗ-1 : ರೂ. 200-00
2) ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ : ರೂ. 400-00
3) ಬ್ಯಾಂಕ ಶುಲ್ಕ : ರೂ. 25-00

## ಆನ್ ಲೈನ್ (On line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ

ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ http://vijayapura.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಠಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement slip)ಮತ್ತು ದ್ವಿಪ್ರತಿ ಚಲನ್‌ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್‌ನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾ, ಟ್ರೇಜರಿ ಶಾಖೆ ವಿಜಯಪುರದಲ್ಲಿ ಜಮಾ ಆಗುವಂತೆ ಪಾವತಿಸಬೇಕು.

ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್‌ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು.ಇನ್ನೊಂದು ಚಲನ್ ಪ್ರತಿ ಬ್ಯಾಂಕ ಬಳಿ ಇರುತ್ತದೆ.ಈ ದಾಖಲೆಗಳನ್ನು ಪರಿಶೀಲನೆಗೆ ನಿಗದಿಪಡಿಸಿದ ದಿನಾಂಕದಂದು ಹಾಜರುಪಡಿಸತಕ್ಕದ್ದು.ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕ+ಬ್ಯಾಂಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ 22-06-2018 ಆಗಿರುತ್ತದೆ. ಡಿ.ಡಿ/ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೇ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ನೇಮಕಾತಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಅರ್ಜಿ ಶುಲ್ಕವನ್ನು ದಿನಾಂಕ 23-05-2018 ರಿಂದ 22-06-2018 ರವರೆಗೆ ಸ್ಟೇಟ್ ಬ್ಯಾಂಕ ಆಫ್ ಇಂಡಿಯಾ, ಟ್ರೇಜರಿ ಶಾಖೆ ವಿಜಯಪುರ ಕರಂಟ್ ಖಾತೆ ನಂ. 32421782822 IFS Code No.SBIN0007225, MICR Code 586002003 ಇದಕ್ಕೆ ಬ್ಯಾಂಕ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.

ಅಭ್ಯರ್ಥಿಗಳು ಆನ್-ಲೈನ್‌ನಲ್ಲಿ ನಿಗದಿತ ಶುಲ್ಕ ಪಾವತಿಯ ಕುರಿತು ವಸ್ತುಸ್ಥಿತಿಯನ್ನು ಶುಲ್ಕ ಪಾವತಿಸಿದ 5 ದಿವಸಗಳ ನಂತರ ಪರಿಶೀಲಿಸಿಕೊಳ್ಳಬಹುದು.ಪಾವತಿಯಾಗಿರುವುದು ಖಚಿತವಾಗದಿದ್ದಲ್ಲಿ, ಚಲನ್ ಪ್ರತಿಯನ್ನು 08352-256666 ಗೆ ಫ್ಯಾಕ್ಸ ನೀಡತಕ್ಕದ್ದು.

**ಅರ್ಹತಾ ಷರತ್ತುಗಳು ಈ ಕೆಳಗಿನಂತಿರುತ್ತವೆ.**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ ಮಾನಸಿಕ ನ್ಯೂನ್ಯತೆಯಿಂದ ಮುಕ್ತರಾಗಿರತಕ್ಕದ್ದು.

ಇ) ಎಸ್.ಎಸ್.ಎಲ್.ಸಿ ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿ.ಸಿ) ಅಥವಾ ಕ್ಯುಮುಲೇಟಿವ್ ರಿಕಾರ್ಡನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುವುದು. ಇತರೆ ಯಾವುದೇ ದಾಖಲೆ ಪರಿಗಣಿಸಲಾಗುವುದಿಲ್ಲ.

ಈ) ಸರ್ಕಾರದ ಅಧಿಸೂಚನೆ ಕ್ರ.ಸಂ.ಸಿಆಸುಇ 118 ಸೇಅನೇ 2009 ದಿನಾಂಕ 28-06-2010 ರನ್ವಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗಲು ವಿನಾಯಿತಿ ಪ್ರಮಾಣ ಪತ್ರ ಹಾಜರಪಡಿಸದ ಅಥವಾ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆಯಾಗದ ಹೊರತು ನೇಮಕಾತಿಗೆ ಅರ್ಹತೆ ಹೊಂದಿರುವುದಿಲ್ಲ.

ಉ) ಕರ್ನಾಟಕ ನಾಗರಿಕ ಸೇವೆ (ಕಂಪ್ಯೂಟರ ಸಾಕ್ಷರತಾ ಪರೀಕ್ಷೆ) ನಿಯಮಗಳು 2012 ರ ನಿಯಮ 2 ರಲ್ಲಿ ನಿಗದಿಪಡಿಸಿರುವಂತೆ ಹುದ್ದೆಗೆ ಆಯ್ಕೆಗೊಂಡ ಅಭ್ಯರ್ಥಿಗಳು ಸರ್ಕಾರದವರು ನಡೆಸುವ ಅಥವಾ ಸರ್ಕಾರದ ಅನುಮೋದಿತ ಏಜೆನ್ಸಿಯವರು ತೆಗೆದುಕೊಳ್ಳುವ (ಕಂಪ್ಯೂಟರ ಸಾಕ್ಷರತಾ ಪರೀಕ್ಷೆ) ಯಲ್ಲಿ ಶೇಕಡಾ 50 ಕ್ಕಿಂತ ಕಡಿಮೆ ಇಲ್ಲದಷ್ಟು ಅಂಕಪಡೆದು ಪಾಸಾದ ಬಗ್ಗೆ ಪ್ರಮಾಣ ಪತ್ರವನ್ನು ಮೂರು ತಿಂಗಳ ಅವಧಿಯೊಳಗೆ ಹಾಜರಪಡಿಸತಕ್ಕದ್ದು.

**ನಿಗಧಿಪಡಿಸಿದ ವಿದ್ಯಾರ್ಹತೆ**

1) ಪಿ.ಯು.ಸಿ ಪಾಸಾಗಿರತಕ್ಕದ್ದು ಅಥವಾ ಸಿ.ಬಿ.ಎಸ್.ಇ/ ಐ.ಸಿ.ಎಸ್.ಇ ಇವರಿಂದ ನಡೆಸಲ್ಪಟ್ಟ 12 ನೇ ತರಗತಿ ಪರೀಕ್ಷೆಯಲ್ಲಿ ಪಾಸಾಗಿರತಕ್ಕದ್ದು. ಈ ಅಧಿಸೂಚನೆಯಲ್ಲಿ ತಿಳಿಸಿದಂತೆ ಅರ್ಜಿ ಸಲ್ಲಿಸಲು ನೀಡಲಾದ ಕೊನೆಯ ದಿನಾಂಕ 22-06-2018ರ ಮುಂಚಿತವಾಗಿ ಹೊಂದಿರತಕ್ಕದ್ದು. ದೂರ ಶಿಕ್ಷಣದ ಮೂಲಕ ಪಿಯುಸಿ ಅಥವಾ ಸಮಾನಂತರ ವಿದ್ಯಾರ್ಹತೆ ಹೊಂದಿರುವವರು ಅರ್ಹರಿರುವುದಿಲ್ಲ.

2) ಗಣಕಯಂತ್ರಗಳ ಬಗ್ಗೆ ತಿಳುವಳಿಕೆ ಇದ್ದು ಬೇಸಿಕ ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.
3) ಮೂಲ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಪಿ.ಯು.ಮಂಡಳಿಯಿಂದ ದೃಢಿಕರಿಸಿದ ನಂತರ ಅಂತಿಮ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವದು

**ನಿಗಧಿಪಡಿಸಿದ ವಯೋಮಿತಿ:**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 22-06-2018 ರಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| | | |
|---|---|---|
| ಕನಿಷ್ಠ ವಯೋಮಿತಿ | : 18 ವರ್ಷ | |
| ಗರಿಷ್ಠ ವಯೋಮಿತಿ | : ಸಾಮಾನ್ಯ ವರ್ಗ | : 35 ವರ್ಷ |
| | : 2ಎ/2ಬಿ/3ಎ/3ಬಿ | : 38 ವರ್ಷ |
| | ಪ.ಜಾ/ ಪ.ಪಂ/ ಪ್ರವರ್ಗ-1 | : 40 ವರ್ಷ |

ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) 1977 ರ ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ಈ ಕೆಳಗಿನ ದಾಖಲೆಗಳನ್ನು ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು.

1) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು, ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂತಹ ಹುದ್ದೆಯನ್ನು ಧಾರಣ ಮಾಡಿರುವಷ್ಟು ಅಥವಾ ಧಾರಣ ಮಾಡಿದಷ್ಟು ಅಥವಾ ಹತ್ತು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
2) ಮಾಜಿ ಸೈನಿಕನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವ ವರ್ಷಗಳನ್ನು ಸೇರಿಸಬೇಕು.
3) ಪೂರ್ಣಾವಧಿ ಕೆಡೆಟ್ ಇನ್ಸ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ ಹಾಗೆ ಕೆಡೆಟ್ ಇನ್ಸಸ್ಟ್ರಕ್ಟರ್ ರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು
4) ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್‌ಸ್ಟ್ರಕ್ಟರ್ ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯು ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್ಸಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು
5) ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.
6) ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ ಅಭ್ಯರ್ಥಿಯ ಸಂಧರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣ ಮಾಡಿರುವಷ್ಟು ಅಥವಾ ಧಾರಣ ಮಾಡಿದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
7) ಅಭ್ಯರ್ಥಿ ವಿಧವೆಯಾಗಿರುವ ಸಂದರ್ಭದಲ್ಲಿ ಹತ್ತು ವರ್ಷಗಳು
8) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

**ಜಾತಿ ಮೀಸಲಾತಿ ಖೋಟಾದಡಿ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ತಹಸೀಲ್ದಾರ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿಗಳಿಂದ ಈ ಕೆಳಗಿನಂತೆ ಸಂಬಂಧಿಸಿದ ಪ್ರಮಾಣ ಪತ್ರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿರಬೇಕು**

1) ಪರಿಶಿಷ್ಟಜಾತಿ /ಪರಿಶಿಷ್ಟಪಂಗಡ ಅಭ್ಯರ್ಥಿಗಳು ನಮೂನೆ “ಡಿ” ರಲ್ಲಿ(ಅನುಬಂಧ-1)

2) ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ "ಇ" ರಲ್ಲಿ (ಅನುಬಂಧ-2)

3) ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ "ಎಫ್"ರಲ್ಲಿ(ಅನುಬಂಧ-3)

4) ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ರವರಿಂದ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

**ಗ್ರಾಮೀಣ ಅಭ್ಯರ್ಥಿ ಖೋಟಾದಡಿ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಗ್ರಾಮೀಣ ಪ್ರದೇಶದಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿಬೇಕು ಹಾಗೂ ತಾವು ವ್ಯಾಸಂಗ ಮಾಡಿದ ಶಾಲೆಯ ಮುಖ್ಯಾಪಾಧ್ಯಾಯರಿಂದ ಸಹಿ ಹಾಗೂ ಮೊಹರಿನೊಂದಿಗೆ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರಬೇಕು.**

1) ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, 2ಎ, 2ಬಿ. 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-2 ನ್ನು ಪಡೆದಿಟ್ಟುಕೊಂಡಿರತಕ್ಕದ್ದು.

2) ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ಮೇಲುಸ್ತುರಕ್ಕೆ ಸೇರಿಲ್ಲದಿರುವ ಬಗ್ಗೆ ಪ್ರಮಾಣ ಪತ್ರ ನಮೂನೆ-1 ನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

**ಕನ್ನಡ ಮಾಧ್ಯಮ ಅಭ್ಯರ್ಥಿಗಳು ಈ ಕೆಳಗಿನ ಪ್ರ ಪತ್ರವನ್ನು ಪಡೆದಿಟ್ಟುಕೊಂಡಿರಬೇಕು.**

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು.

**ಯೋಜನಾ ನಿರಾಶ್ರಿತ ಅಭ್ಯರ್ಥಿಗಳು ಈ ಕೆಳಗಿನ ಪ್ರ ಪತ್ರವನ್ನು ಪಡೆದಿಟ್ಟುಕೊಂಡಿರಬೇಕು.**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರವರಿಂದ ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

**ಅಂಗವಿಕಲರ ಮೀಸಲಾತಿಯಡಿ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಈ ಕೆಳಗಿನಂತೆ ಅಂಗವಿಕಲ ಹೊಂದಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದಿಟ್ಟುಕೊಂಡಿರಬೇಕು.**

ಅಂಗವಿಕಲರಿಗೆ ಮೀಸಲಿದ್ದ ಹುದ್ದೆಗಳಿಗೆ ಶ್ರವಣದೋಷವುಳ್ಳವರು,(Hearing impaired) ಮಾತ್ರ ಅರ್ಜಿ ಸಲ್ಲಿಸಬಹುದು.

ಈ ಮೇಲಿನ ಅಂಗವಿಕಲರು ಹೊರತುಪಡಿಸಿ ಇತರ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಗ್ರಾಮಲೆಕ್ಕಿಗರ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವದಿಲ್ಲ.

ಸರ್ಕಾರದ ಅಧಿಕೃತ ಜ್ಞಾಪನ ನಂ.ಸಿಆಸುಇ/128/ಸೆನೆನಿ/2005 ದಿ.19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವದಿಲ್ಲ. ಹಾಗೂ

ದಾಖಲಾತಿ ಪರಿಶೀಲನೆಯ ದಿನ ವಿಜಯಪುರ ಜಿಲ್ಲೆಯ ವೈದ್ಯಕೀಯ ಮಂಡಳಿಯಿಂದ ಪರಿಶೀಲನೆಗೆ ಒಳಪಡಿಸಿ ಅಂಗವಿಲತೆಯ ಬಗ್ಗೆ ದೃಢಪಡಿಸಿಕೊಳ್ಳಲಾಗುವುದು.

**<u>ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ವಿಧಾನ</u>**

ಕರ್ನಾಟಕ ಜನರಲ್ ಸರ್ವಿಸಸ್ (Revenue Subordinate Branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ ಪರೀಕ್ಷೆ ಅಥವಾ CBSCಅಥವಾ ICSE ನಡೆಸುವ 12 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (On merit) ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರ ವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ಪ್ರಕಟಿಸಲಾಗುವುದು.

**<u>ತಾತ್ಕಾಲಿಕ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ಸೂಚಿಸಿದ ದಿನಾಂಕದಂದು ನೇಮಕಾತಿ ಪ್ರಾಧಿಕಾರದ ಎದುರು ಮೂಲ ಪ್ರಮಾಣ ಪತ್ರಗಳನ್ನು ತಪ್ಪದೇ ಹಾಜರ್‌ಪಡಿಸತಕ್ಕದ್ದು.</u>**

1) ಪಿ.ಯು.ಸಿ ಪರೀಕ್ಷೆ ಅಥವಾ CBSC ಅಥವಾ ICSE ನಡೆಸವ 12 ನೇ ತರಗತಿ ಪರೀಕ್ಷೆಯ ಅಂಕ ಪಟ್ಟಿ ಪ್ರಮಾಣ ಪತ್ರ.
2) ಗಣಕಯಂತ್ರಗಳ ಬಗ್ಗೆ ತಿಳುವಳಿಕೆ ಇದ್ದು ಬೇಸಿಕ್ ಕಂಪ್ಯೂಟರ್ ಜ್ಞಾನ ಹೊಂದಿದ ಬಗ್ಗೆ ಪ್ರ ಪತ್ರ
3) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಎಸ್.ಎಸ್.ಎಲ್.ಸಿ / ಟಿ.ಸಿ ಅಥವಾ ಕ್ಯುಮುಲೇಟಿವ್ ರಿಕಾರ್ಡ)
4) ನಿಗಧಿಪಡಿಸಿದ ಅರ್ಜಿ ಶುಲ್ಕ ಬ್ಯಾಂಕಿಗೆ ಜಮಾ ಮಾಡಿರುವ ಚಲನ್
5) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿ ಇರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದ ದಾಖಲೆಗಳು
6) ಪರಿಶಿಷ್ಟ ಜಾತಿ/ ಪರಿಶಿಷ್ಠ ಪಂಗಡ ಮತ್ತು ಪ್ರವರ್ಗ-1 ಹಾಗೂ ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ತಹಶೀಲ್ದಾರ ರವರಿಂದ ಪಡೆದ ಪ್ರಮಾಣ ಪತ್ರ
7) ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
8) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ.
9) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ.
10) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ.
11) ಅಂಗವಿಕಲ ಅಭ್ಯರ್ಥಿಗಳು ಅಂಗವಿಕಲತೆ ಹೊಂದಿದ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಪಡೆದ ಪ್ರಮಾಣ ಪತ್ರ
12) ಇತರೇ ಮಿಸಲಾತಿಯಡಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಸಂಬಂಧಿಸಿದ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ

**<u>ಸಾಮಾನ್ಯ ಸೂಚನೆಗಳು.</u>**

1) ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು

ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ /ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

2) ಅರ್ಜಿಯಲ್ಲಿ ತಪ್ಪು ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೆ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಅಂಥವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

3) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

4) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್ ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.

5) ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

6) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವದಿಲ್ಲ.

7) ಇಬ್ಬರು ಗಣ್ಯ ವ್ಯಕ್ತಿಗಳಿಂದ ಅಥವಾ ಪತ್ರಾಂಕಿತ ಅಧಿಕಾರಿಗಳಿಂದ ಪಡೆದ ನಡತೆ ಪ್ರಮಾಣ ಪತ್ರ ಹೊಂದಿರತಕ್ಕದ್ದು.

8) ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು ಹಾಗೂ ಅಭ್ಯರ್ಥಿಯು ಗಣಕಯಂತ್ರಗಳ ಬಗ್ಗೆ ತಿಳುವಳಿಕೆ ಇದ್ದು ಬೇಸಿಕ್ ಕಂಪ್ಯೂಟರ್ ಜ್ಞಾನ ಹೊಂದಿರತಕ್ಕದ್ದು.

9) ಪ್ರಕಟಿಸಿರುವ ಹುದ್ದೆಗಳನ್ನು ಹೆಚ್ಚು ಮಾಡುವ ಅಥವಾ ಕಡಿಮೆ ಮಾಡುವ ಹಕ್ಕು ನೇಮಕಾತಿ ಪ್ರಾಧಿಕಾರಕ್ಕೆ ಪ್ರದತ್ತವಾಗಿರುತ್ತದೆ.

10) ಈ ಅಧಿಸೂಚನೆ ಪ್ರಕಟಿಸಿದ ದಿನಾಂಕದಿಂದ ಮುಂದೆ ಗ್ರಾಮಲೆಕ್ಕಿಗರ ಪದೋನ್ನತಿಯಿಂದ ಸ್ವಯಂ ನಿವೃತ್ತಿಯಿಂದ ಅಥವಾ ಇನ್ನಾವುದೇ ವಿಧದಲ್ಲಿ ಖಾಲಿಯಾಗುವ ಹುದ್ದೆಗಳನ್ನು ಮೆರಿಟ್ ಆಧಾರದಲ್ಲಿ ಮೀಸಲಾತಿಗನುಗುಣವಾಗಿ ಸದರಿ ಪಟ್ಟಿಯಿಂದ ನೇಮಕಾತಿ ಮಾಡುವ ಷರತ್ತಿಗೊಳಪಟ್ಟಿರುತ್ತದೆ.

11) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ನಂತರದ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕವಾಗಿರುತ್ತದೆ.

12) ಈ ಅಧಿಸೂಚನೆ ಅನ್ವಯ ನೇಮಕಾತಿ ಹೊಂದುವ ಅಭ್ಯರ್ಥಿಗಳು ಜಿಲ್ಲೆಯ ಯಾವುದೇ ತಾಲ್ಲೂಕುಗಳಲ್ಲಾದರೂ ಸೇವೆ ಸಲ್ಲಿಸಲು ಬದ್ಧರಾಗಿರಬೇಕು.

13) ನೇಮಕಾತಿ ಪ್ರಕ್ರಿಯೆ ಪ್ರಾರಂಭದ ದಿನಾಂಕದಿಂದ ನೇಮಕಾತಿ ಆದೇಶ ಹೊರಡಿಸುವವರೆಗೆ ಆನ್ ಲೈನ್‌ನಲ್ಲಿ ಮಾಹಿತಿಯನ್ನು ಪಡೆದು ಮೂಲ ದಾಖಲೆಗಳ ಪರಿಶೀಲನೆಗೆ ಹಾಜರಾಗತಕ್ಕದ್ದು.

14) ನಿಗದಿತ ವಿದ್ಯಾರ್ಹತೆಯಲ್ಲಿ ಗಳಿಸಿದ ಅಂಕಗಳ ಮೆರಿಟ್ ಆಧಾರದಲ್ಲಿ ಮೀಸಲಾತಿಗನುಗುಣವಾಗಿ ಪರಿಶೀಲನಾ ಪಟ್ಟಿಯನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಪರಿಶೀಲನಾ ಪಟ್ಟಿಯಲ್ಲಿನ ಅಭ್ಯರ್ಥಿಗಳು ನಿಗದಿತ ದಿನಾಂಕದಂದು ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗಬೇಕಾಗಿರುತ್ತದೆ.

15) ನಿಗದಿತ ದಿನದಂದು ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಮತ್ತು ಪರಿಶೀಲನಾ ಪಟ್ಟಿಯ ಅಭ್ಯರ್ಥಿಗಳಿಗೆ ಯಾವುದೇ ಪ್ರತ್ಯೇಕ ಸೂಚನಾ ಪತ್ರವನ್ನು ಈ ಕಾರ್ಯಾಲಯದಿಂದ ಕಳುಹಿಸಲಾಗುವುದಿಲ್ಲ.

16) ಆಯ್ಕೆ ಸಂಬಂಧವಾಗಿ ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದವಿರುವದಿಲ್ಲ.

17) ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ಜಿಲ್ಲಾಧಿಕಾರಿಗಳು ವಿಜಯಪುರ ಇವರ ಕಛೇರಿಯ ಸಿಬ್ಬಂದಿ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆ.

18) ನೇಮಕಾತಿ ಹೊಂದಿದ ಅಭ್ಯರ್ಥಿಗಳು ಎರಡು (02) ವರ್ಷಗಳ ಪರಿವೀಕ್ಷಣಾವಧಿ ಪೂರೈಸುವುದು ಕಡ್ಡಾಯವಾಗಿರುತ್ತದೆ.

19) ಅಧಿಕೃತ ವೆಬ್‌ಸೈಟ್ http://Vijayapura.nic.in ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ. ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ 08352-251289 ರಲ್ಲಿ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದು.

(ಎಸ್.ಬಿ.ಶೆಟ್ಟೆಣ್ಣವರ, ಭಾ.ಆ.ಸೇ )
ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇಮಕಾತಿ ಆಯ್ಕೆ
ಪ್ರಾಧಿಕಾರ ಹಾಗೂ
ಜಿಲ್ಲಾಧಿಕಾರಿಗಳು ವಿಜಯಪುರ

ಪ್ರತಿ:- ಸಂಕಲನಾಧಿಕಾರಿಗಳು, ಸರ್ಕಾರಿ ಹೊರವಲಯ ಮುದ್ರಣಾಲಯ, ಆರ್.ವಿ ಕಾಲೇಜು ಅಂಚೆ, 8 ನೇ ಮೇನ್, ಮೈಸೂರು ರಸ್ತೆ, ಕೆಂಗೇರಿ ಬೆಂಗಳೂರು-560059 ಇವರಿಗೆ ಕಳುಹಿಸಿತ್ತಾ ಈ ಅಧಿಸೂಚನೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು ವಿಜಯಪುರ ಇವರಿಗೆ ಒದಗಿಸಲು ಕೋರಲಾಗಿದೆ.

<u>ಪ್ರತಿಯನ್ನು ಆದರ ಪೂರ್ವಕ ಸಲ್ಲಿಸಲಾಗಿದೆ.</u>

1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಬೆಂಗಳೂರು
2) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಸೇವೆಗಳು) ಬಹುಮಹಡಿಗಳ ಕಟ್ಟಡ ಬೆಂಗಳೂರು
3) ಮಾನ್ಯ ಪ್ರಾದೇಶಿಕ ಆಯುಕ್ತರು ಬೆಳಗಾವಿ ವಿಭಾಗ, ಬೆಳಗಾವಿ
4) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5) ಡಿಸ್ಟ್ರಿಕ್ಟ್ ಇನ್ಫಾರ್ಮೆಟಿಕ್ ಆಫೀಸರ್, ಎನ್.ಆಯ್.ಸಿ ವಿಜಯಪುರ ಇವರಿಗೆ ಮಾಹಿತಿ ಮತ್ತು ಮುಂದಿನ ಕ್ರಮ ಕುರಿತು ಕಳುಹಿಸಿದೆ.
6) ಉಪವಿಭಾಗಾಧಿಕಾರಿಗಳು ವಿಜಯಪುರ/ಇಂಡಿ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
7) ತಹಶೀಲ್ದಾರ ವಿಜಯಪುರ, ಬ.ಬಾಗೇವಾಡಿ, ಮುದ್ದೇಬಿಹಾಳ, ಇಂಡಿ, ಸಿಂದಗಿ ಇವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
8) ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿಗಳು ವಿಜಯಪುರ
9) ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ವಿಜಯಪುರ
10) ಬ್ರ್ಯಾಂಚ್ ಮ್ಯಾನೇಜರ್, ಭಾರತೀಯ ಸ್ಟೇಟ್ ಬ್ಯಾಂಕ, ಟ್ರೆಜರಿ ಶಾಖೆ ವಿಜಯಪುರ

ಈ ಕಾರ್ಯಾಲಯದ ಸೂಚನಾ ಫಲಕಕ್ಕೆ/ ಹೆಚ್ಚುವರಿ ಪ್ರತಿಗಳು